ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಯೋಗಾಲಯ ಮತ್ತು ಶೌಚಾಲಯಗಳ ಕೊರತೆ

255 (552) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸಿಂಧನೂರು ತಾಲ್ಲೂಕಿನಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಯೋಗಾಲಯ ಮತ್ತು ಶೌಚಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಈ ಕಾಲೇಜುಗಳಲ್ಲಿ ಪ್ರಯೋಗಾಲಯ ಮತ್ತು ಶೌಚಾಲಯಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಈ) ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ; ಇದಕ್ಕಾಗಿ ಎಷ್ಟು ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡಲಾಗುವುದು ? (ಮಾಹಿತಿ ನೀಡುವುದು)

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಬಂದಿದೆ.

ಇ) ಅನುದಾನದ ಲಭ್ಯತೆಯನ್ನಾಧರಿಸಿ ಮೂಲ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಅನುದಾನದ ಲಭ್ಯತೆಯ ನಂತರ ಸದರಿ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಿದ್ದು, ಕಾಮಗಾರಿಯ ಅನುಮೋದಿತಾ ಅಂದಾಜು ವೆಚ್ಚಕ್ಕನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿ

242 (564) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಹಾಸನ ತಾಲ್ಲೂಕು, ಕಟ್ಟಾಯ ಗ್ರಾಮ ಹೋಬಳಿ ಕೇಂದ್ರವಾಗಿದ್ದು ಪ್ರಾಥಮಿಕ ಆರೋಗ್ಯ ಕೇಂದ್ರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಅ) ಬಂದಿದ್ದಲ್ಲಿ, ಈ ಗ್ರಾಮಕ್ಕೆ ಆರೋಗ್ಯ ಕೇಂದ್ರ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಇ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು ?

ಶ್ರೀ ಅರವಿಂದ ಲಿಂಬಾವಾಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ), ಆ) ಮತ್ತು ಇ) ಹಾಸನ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ 2,29,711 ಆಗಿದ್ದು, ಮಾರ್ಗಸೂಚಿಗಳ ಪ್ರಕಾರ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದೆ. ಆದರೆ, ಈಗಾಗಲೇ ಸದರಿ ತಾಲ್ಲೂಕಿನಲ್ಲಿ 19 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಆದುದರಿಂದ, ಹಾಸನ ತಾಲ್ಲೂಕು ಕಟ್ಟಾಯ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಮುಂದುವರೆದು, ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿ ಮೇಲ್ದರ್ಜೆಗೇರಿಸುವಿಕೆಯನ್ನು ಒಂದು ನೀತಿ ನಿರ್ಣಯವಾಗಿ ದಿನಾಂಕ : 11–01–2011 ರಿಂದ ಮೂರು ವರ್ಷಗಳ ಅವಧಿಗೆ ಸರ್ಕಾರವು ತಡೆ ಹಿಡಿದಿದೆ.

ಮಲೈ ಮಹದೇಶ್ವರ ಬೆಟ್ಟಕ್ಕೆ ಕುಡಿಯುವ ನೀರು

248 (417) ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. :– ಮಾನ್ಯ ಮುಜರಾಯಿ ಹಾಗೂ ಬಂದರು, ಒಳನಾಡು ಜಲಸಾರಿಗೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕಾವೇರಿ ನದಿಯಿಂದ ಮಲೈ ಮಹದೇಶ್ವರ ಬೆಟ್ಟಕ್ಕೆ ಕುಡಿಯುವ ನೀರು ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

ಅ) ಹಾಗಿದ್ದರೆ, ಈಗ ಯಾವ ಹಂತದಲ್ಲಿದೆ ;

ಇ) ಪೂರ್ಣಗೊಳಿಸಲು ಎಷ್ಟು ದಿವಸ ಬೇಕಾಗುತ್ತದೆ ;

ಈ) ಈವರೆವಿಗೆ ಎಷ್ಟು ಹಣ ವೆಚ್ಚ ಮಾಡಲಾಗಿದೆ ; ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ ; (ವಿವರ ನೀಡುವುದು)